Akashvani : Bangalore
Regional Bulletin In Kannada
18.10.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

18.10.2024 / 18.40 hrs

<><*<><>*><>

ಮುಖ್ಯಾಂಶಗಳು

೧. ಬೆಳಗಾವಿಯಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನದ ಸಿದ್ಧತೆ ಪರಿಶೀಲನೆ

೨. ತುಮಕೂರನ್ನು ಗ್ರೇಟರ್ ಬೆಂಗಳೂರು ಎಂದು ಪರಿಗಣಿಸುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗುವುದು- ಗೃಹ ಸಚಿವ ಡಾ.ಜಿ.ಪರಮೇಶ್ವರ್

೩. ನಿರುದ್ಯೋಗಿ ಯುವ ಜನರಿಗೆ ಉದ್ಯೋಗಾವಕಾಶ ಕಲ್ಪಿಸಲು ಕೈಗಾರಿಕಾ ಇಲಾಖೆಯ ವಿಭಾಗ ಸ್ಥಾಪನೆ ಉದ್ದೇಶ- ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

೪. 'ಸ್ವಚ್ಛತಾ ಹಿ ಸೇವಾ'- ಕೇಂದ್ರ ಅಭಿಯಾನದಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ರಾಜ್ಯದಲ್ಲಿ ಮೊದಲ ಸ್ಥಾನ

೫. ದೀಪಾವಳಿ ಹಬ್ಬಕ್ಕಾಗಿ ಮಂಗಳೂರು-ಬೆಂಗಳೂರು ನಡುವೆ ವಿಶೇಷ ರೈಲು ಸಂಚಾರ

<><*<><>*><>

ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನ ಡಿಸೆಂಬರ್ ತಿಂಗಳಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಮತ್ತು ವಿಧಾನಪರಿಷತ್ ಸಭಾಧ್ಯಕ್ಷ ಬಸವರಾಜ ಹೊರಟ್ಟಿ ಬೆಳಗಾವಿಯಲ್ಲಿಂದು ಸುವರ್ಣ ಸೌಧದಲ್ಲಿ ಅಗತ್ಯ ಸಿದ್ಧತೆಗಳನ್ನು ಪರಿಶೀಲಿಸಿದರು. ಸ್ಪೀಕರ್ ಯು.ಟಿ.ಖಾದರ್ ಮಾತನಾಡಿ, ಅಧಿವೇಶನದ ನಿರ್ದಿಷ್ಟ ದಿನಾಂಕವನ್ನು ಸಚಿವ ಸಂಪುಟದಲ್ಲಿ ತೀರ್ಮಾನಿಸಿ ಮುಖ್ಯಮಂತ್ರಿಯವರು ಘೋಷಣೆ ಮಾಡಲಿದ್ದಾರೆ ಎಂದರು. ಅಧಿವೇಶನದ ಪೂರ್ವ ಸಿದ್ಧತೆಗಾಗಿ ಅಧಿಕಾರಿಗಳ ಸಭೆ ನಡೆಸಲಾಗಿದ್ದು, ಅಗತ್ಯ ಸಲಹೆ ಸೂಚನೆಗಳನ್ನು ನೀಡಲಾಗಿದೆ. ಕಳೆದ ವರ್ಷ ಬೆಳಗಾವಿಯಲ್ಲಿ ನಡೆದಿದ್ದ ಚಳಿಗಾಲದ ಅಧಿವೇಶನ ಅತ್ಯುತ್ತಮವಾಗಿತ್ತು. ಈ ಬಾರಿ ಇನ್ನಷ್ಟು ಅಚ್ಚುಕಟ್ಟಾಗಿ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗುವುದು ಎಂದು ಹೇಳಿದರು. ಉತ್ತರ ಕರ್ನಾಟಕ ಜಿಲ್ಲೆಗಳ ಸಮಸ್ಯೆಗಳ ಚರ್ಚೆಗೆ ಬೆಳಗಾವಿ ಅಧಿವೇಶನದಲ್ಲಿ ಹೆಚ್ಚಿನ ಸಮಯ ಮೀಸಲಿಡಲಾಗುವುದು ಎಂದು ತಿಳಿಸಿದರು.

ಧ್ವನಿ: ಯು.ಟಿ.ಖಾದರ್

ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಮಾತನಾಡಿ, ಬೆಳಗಾವಿಯಲ್ಲಿ ನಡೆಯಲಿರುವ ವಿಧಾನಮಂಡಲ ಚಳಿಗಾಲದ ಅಧಿವೇಶನದ ಪೂರ್ವ ಸಿದ್ಧತೆಗಳನ್ನು ಆರಂಭಿಸಲಾಗಿದೆ. ಕಾಂಗ್ರೆಸ್

ಅಧಿವೇಶನ ಮತ್ತಿತರ ಕಾರ್ಯಕ್ರಮಗಳ ರೂಪುರೇಷೆಗಳನ್ನು ಸಿದ್ಧಪಡಿಸಲಾಗುತ್ತಿದೆ ಎಂದು ತಿಳಿಸಿದರು.

ಧ್ವನಿ: ಬಸವರಾಜ ಹೊರಟ್ಟಿ

<><*<><>*><>

ತುಮಕೂರು ನಗರ ರಾಜಧಾನಿ ಬೆಂಗಳೂರಿನ ಭಾಗವಾಗಿ ಬೆಳೆಯುತ್ತಿದ್ದು, ೨೦ ಸಾವಿರ ಎಕರೆ ಜಾಗದಲ್ಲಿ ಏಷಿಯಾದ ಅತಿ ದೊಡ್ಡ ಕೈಗಾರಿಕಾ ಪ್ರದೇಶ ತುಮಕೂರಿನಲ್ಲಿ ನಿರ್ಮಾಣವಾಗುತ್ತಿದೆ. ಇದನ್ನು ಗಮನದಲ್ಲಿಟ್ಟುಕೊಂಡು ತುಮಕೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಿಸಬೇಕಾದ ಅಗತ್ಯವಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉದ್ದೇಶಿತ ಕೈಗಾರಿಕಾ ಪ್ರದೇಶದ ಮೊದಲ ಎರಡು ಹಂತದ ಕಾಮಗಾರಿಗಳು ಪೂರ್ಣಗೊಂಡಿವೆ. ೧೫೦ ಕೈಗಾರಿಕೆಗಳು ಹಾಗೂ ಜಪಾನ್ ಟೌನ್‌ಶಿಪ್ ಬರುತ್ತಿದೆ. ಎಚ್.ಎ.ಎಲ್. ಹೆಲಿಕಾಪ್ಟರ್ ಫ್ಯಾಕ್ಟರಿ ಕಾರ್ಯಾರಂಭ ಮಾಡಿದೆ. ಇನ್ನು ಹಲವು ದೊಡ್ಡ ಕೈಗಾರಿಕೆಗಳು ಬರಲಿವೆ ಎಂದರು. ನೆಲಮಂಗಲ, ದಾಬಾಸ್‌ಪೇಟೆಯವರೆಗೆ ಬೆಂಗಳೂರು ಬೆಳೆದು ನಿಂತಿದೆ. ತುಮಕೂರಿನ ತನಕ ಮೆಟ್ರೋ ರೈಲು ವಿಸ್ತರಣೆಗೂ ಮನವಿ ಸಲ್ಲಿಸಲಾಗಿದೆ. ಮುಂದಿನ ದಿನಗಳಲ್ಲಿ ತುಮಕೂರನ್ನು ಗ್ರೇಟರ್ ಬೆಂಗಳೂರು ಎಂದು ಪರಿಗಣಿಸುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗುವುದು ಎಂದರು.

<><*<><>*><>

ರಾಜ್ಯದ ಹಾಗೂ ದೇಶದ ನಿರುದ್ಯೋಗಿ ಯುವ ಜನರಿಗೆ ಉದ್ಯೋಗಾವಕಾಶ ಕಲ್ಪಿಸಲು ಕೈಗಾರಿಕಾ ಇಲಾಖೆಯ ಪ್ರತ್ಯೇಕ ವಿಭಾಗವನ್ನು ಸ್ಥಾಪಿಸುವ ಚಿಂತನೆ ಇದೆ. ರಾಜ್ಯದ ಬೃಹತ್ ನಗರಗಳಲ್ಲಿ ಕೈಗಾರಿಕಾ ಇಲಾಖೆಯಿಂದ ಹಲವು ಕಾರ್ಖಾನೆಗಳನ್ನು ತೆರೆದು, ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಲಾಗುವುದು ಎಂದು ಕೇಂದ್ರದ ಉಕ್ಕು ಹಾಗೂ ಭಾರೀ ಕೈಗಾರಿಕಾ ಖಾತೆ ಸಚಿವ ಕುಮಾರಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿಂದು ಕೇಂದ್ರ ಕೈಗಾರಿಕಾ ಇಲಾಖೆ ಮತ್ತು ದೇಶದ ಪ್ರತಿಷ್ಠಿತ ಖಾಸಗಿ ಕಂಪನಿಗಳ ಸಹಭಾಗಿತ್ವದಲ್ಲಿ ಎರಡು ದಿನಗಳ ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಉದ್ಯೋಗ ಮೇಳದಲ್ಲಿ ೧೫೦ ಸ್ಟಾಲ್‌ಗಳನ್ನು ತೆರೆಯಲಾಗಿದ್ದು, ೨೫ ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಆಗಮಿಸಿವೆ. ೩ ಸಾವಿರಕ್ಕೂ ಅಧಿಕ ಯುವ ಜನರಿಂದ ಉದ್ಯೋಗಕ್ಕಾಗಿ ಇಂದು ಅರ್ಜಿ ಸ್ವೀಕರಿಸಲಾಯಿತು ಎಂದರು. ಈ ಉದ್ಯೋಗ ಮೇಳದಿಂದ ಕನಿಷ್ಠ ೨ ಸಾವಿರ ಮಂದಿಗೆ ನೌಕರಿ ದೊರೆಯುವ ನಿರೀಕ್ಷೆಯಿದೆ. ಉದ್ಯೋಗ ಸಿಗದೆ ಇರುವವರು ಚಿಂತಿಸಬೇಕಾಗಿಲ್ಲ. ಡಿಸೆಂಬರ್ ವೇಳೆಗೆ ಅರ್ಜಿ ಕೊಟ್ಟಿರುವ ಪ್ರತಿಯೊಬ್ಬರಿಗೂ ಉದ್ಯೋಗ ದೊರೆಯಲಿದೆ ಎಂದು ಸಚಿವ ಕುಮಾರಸ್ವಾಮಿ ತಿಳಿಸಿದರು.

<><*<><>*><>

ಹಳೆ ಹುಬ್ಬಳ್ಳಿ ಗಲಭೆ ಪ್ರಕರಣ ವಾಪಸ್ ಪಡೆದಿರುವ ವಿಚಾರದಲ್ಲಿ ರಾಜ್ಯದ ಕಾಂಗ್ರೆಸ್ ಸರ್ಕಾರ ಓಲೈಕೆ ರಾಜಕಾರಣ ಮಾಡುತ್ತಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ್ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಳೆ ಹುಬ್ಬಳ್ಳಿ ಗಲಭೆ ಪ್ರಕರಣ ವಾಪಸ್ ಪಡೆದ ಸರ್ಕಾರದ ಕ್ರಮವನ್ನು ಖಂಡಿಸಿ, ಇದೇ ೨೫ನೇ ತಾರೀಖು ಪಕ್ಷದ ರಾಜ್ಯ ಪ್ರಮುಖರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

<><*<><>*><>

ಚಿಕ್ಕಮಗಳೂರು ಜಿಲ್ಲೆ ಕೇಂದ್ರ ಸರ್ಕಾರದ 'ಸ್ವಚ್ಛತಾ ಹಿ ಸೇವಾ' ಅಭಿಯಾನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, ರಾಜ್ಯಕ್ಕೆ ಮೊದಲ ಸ್ಥಾನವನ್ನು ಪಡೆದುಕೊಂಡಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಚ್.ಎಸ್.ಕೀರ್ತನಾ ತಿಳಿಸಿದ್ದಾರೆ.

ಧ್ವನಿ:ಕೀರ್ತನಾ, ಚಿಕ್ಕಮಗಳೂರು ಸಿಇಓ

<><*<><>*><>

ಬಾಗಲಕೋಟೆ ಜಿಲ್ಲೆಯಲ್ಲಿ ಹೊಸದಾಗಿ ೮ ಮತಗಟ್ಟೆ ಸ್ಥಾಪನೆಗೆ ಸಲ್ಲಿಸಲಾದ ಪ್ರಸ್ತಾವನೆಗೆ ಚುನಾವಣಾ ಆಯೋಗ ಅನುಮೋದನೆ ನೀಡಿದ ಎಂದು ಜಿಲ್ಲಾಧಿಕಾರಿ ಜಾನಕಿ.ಕೆ.ಎಂ. ತಿಳಿಸಿದ್ದಾರೆ. ಅವರು ಇಂದು ಮತದಾನ ಕೇಂದ್ರಗಳ ತರ್ಕಬದ್ಧಗೊಳಿಸುವ ಕುರಿತು ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ ನಡೆಸಿದರು. ೧ ಸಾವಿರದ ೫೦೦ ಕ್ಕೂ ಹೆಚ್ಚು ಮತದಾರರನ್ನು ಹೊಂದಿರುವ ಮತಗಟ್ಟೆಗಳಲ್ಲಿ ಸಹಾಯಕ ಮತಗಟ್ಟೆ ಸ್ಥಾಪನೆ, ಮತದಾರರು ಮತಗಟ್ಟೆ ತಲುಪಲು ಒಂದು ಅಥವಾ ಎರಡು ಕಿಲೋಮೀಟರ್‌ಗಿಂತ ಹೆಚ್ಚಿಗೆ ದೂರ ಹೋಗಬೇಕಾದಲ್ಲಿ ಹೆಚ್ಚುವರಿಯಾಗಿ ಏಳು ಮತಗಟ್ಟೆಗಳು ಸೇರಿದಂತೆ ಒಟ್ಟು ೮ ಮತಟ್ಟೆ ಸ್ಥಾಪನೆಗೆ ಅನುಮೋದನೆ ದೊರೆತಿದೆ ಎಂದು ಅವರು ವಿವರಿಸಿದರು.

<><*<><>*><>

ದೀಪಾವಳಿ ಹಬ್ಬದ ವೇಳೆ ಪ್ರಯಾಣಿಕರ ದಟ್ಟಣೆಯ ನಿರ್ವಹಣೆಗಾಗಿ ಮಂಗಳೂರು-ಬೆಂಗಳೂರು ನಡುವೆ ವಿಶೇಷ ರೈಲು ಸಂಚರಿಸಲಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಮಂಗಳೂರಿಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೀಪಾವಳಿ ಹಬ್ಬದ ವೇಳೆ ದಕ್ಷಿಣ ಕನ್ನಡ ಹಾಗೂ ಉಡುಪಿ ಭಾಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬೆಂಗಳೂರು-ಮಂಗಳೂರು ನಡುವೆ ಸಂಚರಿಸುತ್ತಾರೆ. ಪ್ರಯಾಣಿಕರ ದಟ್ಟನೆ ಹೆಚ್ಚು ಇರುವುದರಿಂದ ವಿಶೇಷ ರೈಲು ಒದಗಿಸುವಂತೆ ರೈಲ್ವೇ ಸಚಿವರಾದ ಅಶ್ವಿನ್ ವೈಷ್ಣವ್ ಹಾಗೂ ರೈಲ್ವೇ ಖಾತೆ ರಾಜ್ಯ ಸಚಿವರಾದ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿತ್ತು. ಅವರು ಸೂಕ್ತವಾಗಿ ಸ್ಪಂದಿಸಿ ವಿಶೇಷ ರೈಲಿನ ಅವಕಾಶ ಕಲ್ಪಿಸಿದ್ದಾರೆ ಎಂದು ತಿಳಿಸಿದರು.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿ....

೧. ಹುಬ್ಬಳ್ಳಿ-ಬೆಂಗಳೂರು ಜನಶತಾಬ್ದಿ ಹಾಗೂ ಶಿವಮೊಗ್ಗ ಜನಶತಾಬ್ದಿ ರೈಲುಗಳಿಗೆ ತಿಪಟೂರಿನಲ್ಲಿ ನಿಲುಗಡೆಗೆ ರೈಲ್ವೆ ಸಚಿವಾಲಯ ಅನುಮೋದನೆ ನೀಡಿದೆ. ತಿಪಟೂರು ನಗರ ಪ್ರಮುಖ ಕೃಷಿ, ವ್ಯಾಪಾರ, ವಾಣಿಜ್ಯ ಕೇಂದ್ರವಾಗಿದ್ದು, ಈ ರೈಲುಗಳ ನಿಲುಗಡೆಯಿಂದ ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಈ ಪ್ರಕ್ರಿಯೆಗೆ ಶೀಘ್ರದಲ್ಲೇ ಚಾಲನೆ ದೊರೆಯಲಿದೆ ಎಂದು ಕೇಂದ್ರ ಸಚಿವ ವಿ.ಸೊಮಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೨. ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಗೆ ಪ್ರಸಕ್ತ ಸಾಲಿನಲ್ಲಿ ೬ ಸಾವಿರದ ೩೦೮ ಮನೆಗಳು ಮಂಜೂರಾಗಿವೆ. ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ೬೭ ಸಾವಿರದ ೬೪೬ ವಸತಿ ರಹಿತರನ್ನು ಪಟ್ಟಿ ಮಾಡಲಾಗಿದ್ದು, ಗ್ರಾಮಸಭೆಗಳನ್ನು ಕಡ್ಡಾಯವಾಗಿ ನಡೆಸಿ, ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು ಎಂದು ಅಧಿಕಾರಿಗಳಿಗೆ ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ್ ಸೂಚಿಸಿದ್ದಾರೆ.

೩. ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ-ನ್ಯೂಜಿಲ್ಯಾಂಡ್ ನಡುವಿನ ಟೆಸ್ಟ್ ಸರಣಿಯ ಮೊದಲ ಪಂದ್ಯದ ಮೂರನೇ ದಿನದಾಟದ ಅಂತ್ಯಕ್ಕೆ ಭಾರತ, ತನ್ನ ಎರಡನೇ ಇನ್ನಿಂಗ್ಸ್‌ನಲ್ಲಿ ೩ ವಿಕೆಟ್ ನಷ್ಟಕ್ಕೆ ೨೩೧ ರನ್ ಗಳಿಸಿದ್ದು, ನ್ಯೂಜಿಲೆಂಡ್‌ಗಿಂತ ೧೨೫ ರನ್‌ಗಳ ಹಿನ್ನಡೆಯಲ್ಲಿದೆ.

೪. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿಂದು ಶಾಲಾ ಶಿಕ್ಷಣ ಇಲಾಖೆವತಿಯಿಂದ ಪದವಿ ಪೂರ್ವ ಕಾಲೇಜುಗಳ ರಾಜ್ಯಮಟ್ಟದ ಯೋಗ ಪಂದ್ಯಾವಳಿಗಳಿಗೆ ಚಾಲನೆ ನೀಡಲಾಯಿತು. ಶಾಸಕ ಧೀರಜ್ ಮುನಿರಾಜು ಮಾತನಾಡಿ, ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಯೋಗಾಭ್ಯಾಸ ಸಹಕಾರಿ, ಶಾಲಾ ಕಾಲೇಜುಗಳಲ್ಲಿ ಯೋಗಾಭ್ಯಾಸಕ್ಕೆ ಒತ್ತು ನೀಡಬೇಕಿದೆ ಎಂದರು.

೫. ಕೋಲಾರ ಜಿಲ್ಲೆಯಲ್ಲಿ ಮನ್ರೆಗಾ ಯೋಜನೆಯಡಿ ೨೦೨೫-೨೬ ನೇ ಸಾಲಿನಲ್ಲಿ 'ಉದ್ಯೋಗ ಖಾತರಿ ನಡಿಗೆ- ಸಬಲತೆಯೆಡೆಗೆ' ಅಭಿಯಾನವನ್ನು ಆರಂಭಿಸಲಾಗಿದ್ದು, ಗ್ರಾಮೀಣ ಜನರ ಅಗತ್ಯಾನುಸಾರ ಗ್ರಾಮಪಂಚಾಯಿತಿಯಿಂದ ಮುಂದಿನ ವರ್ಷದ ಕ್ರಿಯಾಯೋಜನೆಯನ್ನು ಸಿದ್ಧಪಡಿಸಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಏಕ್‌ರೂಪ್ ಕೌರ್ ತಿಳಿಸಿದ್ದಾರೆ.

೬. ಚಿತ್ರದುರ್ಗ ಜಿಲ್ಲೆಯಲ್ಲಿ ನಿನ್ನೆ ರಾತ್ರಿ ಸುರಿದ ಭಾರೀ ಮಳೆಯಿಂದ ಅಪಾರ ಹಾನಿಯಾಗಿದೆ. ಜಿಲ್ಲೆಯಲ್ಲಿ ಸರಾಸರಿ ೧೧.೩ ಮಿಲಿ ಮೀಟರ್‌ನಷ್ಟು ಮಳೆಯಾಗಿದ್ದು, ಚಳ್ಳಕೆರೆ, ಹಿರಿಯೂರು, ಹೊಳಲ್ಕೆರೆ, ಹೊಸದುರ್ಗ,ಮೊಳಕಾಲ್ಮುರು ತಾಲೂಕುಗಳಲ್ಲಿ ಜನಜೀವನ ಬಾಧಿತವಾಗಿದೆ. ೮೦

ಕ್ಕೂ ಹೆಚ್ಚು ಮನೆಗಳಿಗೆ ಭಾಗಶಃ ಹಾನಿಯಾಗಿದೆ. ಹಲವು ಮನೆಗಳಿಗೆ ಮಳೆ ನೀರು ನುಗ್ಗಿ ಜನರು ಪರದಾಡುವಂತಾಯಿತು.

೭. ಬಾಗಲಕೋಟೆಯಲ್ಲಿಂದು ಉದ್ಯೋಗ ಮೇಳ ನಡೆಯಿತು. ವಿದ್ಯೆಗೆ ತಕ್ಕ ಉದ್ಯೋಗ ದೊರೆತಲ್ಲಿ, ಬದುಕು ಸರಾಗವಾಗುತ್ತದೆ. ಈ ನಿಟ್ಟಿನಲ್ಲಿ ಉದ್ಯೋಗ ಮೇಳಗಳು ಸಹಕಾರಿ ಎಂದು ಜಿಲ್ಲಾಧಿಕಾರಿ ಕೆ.ಎಂ.ಜಾನಕಿ ಹೇಳಿದರು. ವಿಶೇಷಚೇತನ ಯುವಜನರಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗಿತ್ತು.

೮. ಯಾದಗಿರಿ ನಗರದಲ್ಲಿ ಹದಗೆಟ್ಟ ರಸ್ತೆಗಳ ದುರಸ್ತಿಗೆ ಆದ್ಯತೆ ನೀಡಲಾಗುವುದು. ಕಾಮಗಾರಿಯ ಅಂದಾಜು ವೆಚ್ಚ ಪಟ್ಟಿ ಸಿದ್ಧಪಡಿಸಲಾಗಿತ್ತು. ಮಳೆ ನಿಂತ ಕೂಡಲೇ ಕಾಮಗಾರಿಯನ್ನು ಆರಂಭಿಸಲಾಗುವುದು ಎಂದು ನಗರ ಸಭಾಧ್ಯಕ್ಷ ಲಲಿತಾ ಆನಪುರ ತಿಳಿಸಿದ್ದಾರೆ.

೯. ಕನ್ನಡ ರಾಜ್ಯೋತ್ಸವವನ್ನು ಮೈಸೂರು ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು. ಓವೆಲ್ ಮೈದಾನದಲ್ಲಿ ಕಾರ್ಯಕ್ರಮ ನಡೆಸಲಾಗುವುದು. ಭವ್ಯ ಮೆರವಣಿಗೆಯಲ್ಲಿ ಕಲಾತಂಡಗಳು, ಸ್ತಬ್ಧಚಿತ್ರಗಳು ಭಾಗವಹಿಸಲಿವೆ ಎಂದು ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್ ತಿಳಿಸಿದ್ದಾರೆ.

೧೦. ಗದಗ್ ಜಿಲ್ಲೆಯ ನರಗುಂದ್ ಹಾಗೂ ರೋಣ ತಾಲೂಕಿನ ಬೆಣ್ಣೆಹಳ್ಳ ಮತ್ತು ಮಲಪ್ರಭ ನದಿಯ ಪ್ರವಾಹ ಪೀಡಿತ ಪ್ರದೇಶಕ್ಕೆ ಇಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿಯ ಸಿಇಒ ಭೇಟಿ ನೀಡಿ ಪರಿಶೀಲಿಸಿದರು. ಪ್ರವಾಹದ ಸಂದರ್ಭದಲ್ಲಿ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ಎಂದು ಸೂಚಿಸಲಾಯಿತು.

<><*<><>*><>

ಇನ್ನು ಹವಾವರ್ತಮಾನ...

ಕರಾವಳಿ ಮತ್ತು ಹೊರನಾಡಿನ ಹಲವೆಡೆ ಮಳೆಯಾಗಿದೆ. ಚಿತ್ರದುರ್ಗ ಜಿಲ್ಲೆ ನಾಯಕನಹಟ್ಟಿಯಲ್ಲಿ ೧೫ ಸೆಂಟಿಮೀಟರ್ ನಷ್ಟು ಭಾರೀ ಮಳೆ ದಾಖಲಾಗಿದೆ.

ರಾಜ್ಯದ ಗರಿಷ್ಠ ತಾಪಮಾನ ೩೨.೩ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ಹಾಗೂ ಕನಿಷ್ಠ ತಾಪಮಾನ ೧೭.೪ ಡಿಗ್ರಿ ಸೆಲ್ಸಿಯಸ್ ಶಿರಾಲಿಯಲ್ಲಿ ದಾಖಲಾಗಿದೆ.

ಬೆಂಗಳೂರು ಮತ್ತು ಸುತ್ತಮುತ್ತ ಮೋಡಕವಿದ ವಾತಾವರಣವಿದ್ದು, ಮಳೆಯಾಗುವ ಸಾಧ್ಯತೆಯಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>